ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	~~279 (361)~~ 279 (345)
ಸದಸ್ಯರ ಹೆಸರು	ಶ್ರೀ ಎಂ ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ	03-02-2021
ಉತ್ತರಿಸುವವರು	ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೊರೋನಾ ಪ್ರಕರಣಗಳು ತಗ್ಗಿದ್ದು, ದೇವಸ್ಥಾನದ ಜಾತ್ರೆ ಹಾಗೂ ಉತ್ಸವಗಳಿಗೆ ಅನುಮತಿ ಆಲೋಚನೆ ಸರ್ಕಾರದ ಮಂದಿದೆಯೇ;	ಕೋವಿಡ್-19 ವೈರಸ್ ಸೋಂಕಿನ ಹಿನ್ನೆಲೆಯಲ್ಲಿ, ಜಾತ್ರಾ/ ಉತ್ಸವಗಳನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದ್ದು, ಉತ್ಸವಗಳನ್ನು ನಿಲ್ಲಿಸಲು ಸಂಪ್ರದಾಯವಿಲ್ಲದ ದೇವಾಲಯಗಳಲ್ಲಿ ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳು ಮತ್ತು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಯಿಂದ ನೀಡಿರುವ ನಿರ್ದೇಶನಗಳಂತೆ ಸಾಮಾಜಿಕ ಅಂತರ ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಿ ಸಾರ್ವಜನಿಕ ಜನಸಂದಣಿ ಇಲ್ಲದಂತೆ ಜಾತ್ರೆ/ಉತ್ಸವಗಳನ್ನು ಸಾಂಕೇತಿಕವಾಗಿ ನಡೆಸಲು ದಿನಾಂಕ: 01-09-2020ರ ಸುತ್ತೋಲೆಯಲ್ಲಿ ಈಗಾಗಲೇ ಅನುಮತಿ ನೀಡಲಾಗಿರುತ್ತದೆ.
ಆ)	ರಾಜಕೀಯ ಪಕ್ಷಗಳು ಬೃಹತ್ ಸಮಾವೇಶಗಳನ್ನು ಆಲೋಚಿಸಲಾಗುತ್ತಿದ್ದು, ಮದುವೆ ಸಮಾರಂಭಗಳಿಗೂ ಅನುಮತಿ ನೀಡಲಾಗುತ್ತಿದೆ; ಆದರೆ ಈ ಕೋವಿಡ್ ನಿಯಮಗಳ ಸಡಿಲಿಕೆಯು ದೇವಸ್ಥಾನಗಳ ಜಾತ್ರೆ ಹಾಗೂ ಉತ್ಸವಗಳಿಗೆ ಅನ್ವಯಿಸದಿರಲು ಕಾರಣವೇನು?	

ಸಂಖ್ಯೆ: ಕಂಇ 28 ಮುಸಪ್ರ 2021

(ಕೋಟಾ ಶ್ರೀನಿವಾಸ ಪೂಜಾರಿ)
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.